ಅಸಲು ದಾವೆ ನಂಃ 215/2018 ಡಿ.ಡಬ್ಲ್ಯೂಃ1–ಬಸವರಾಜ ತಂದೆ ಅಂದಪ್ಪ ಗೌಡಣ್ಣವರ

ಸಾಕ್ಷಿಯನ್ನು ಸತ್ಯ ಪ್ರತಿಜ್ಞೆಯ ಮೇರೆಗೆ ಇಂದು ದಿನಾಂಕಃ 15/10/2025 ರಂದು ಪ್ರಮಾಣೀಕರಿಸಲಾಯಿತು.

**ಪಾಟೀ ಸವಾಲುಃ ವಾದಿ ಪರ ಶ್ರೀ. VSB ವಕೀಲರಿಂದಃ**

ನನ್ನ ಸಾಕ್ಷಿ ಪ್ರಮಾಣ ಪತ್ರಕ್ಕೆ ಮಾಹಿತಿ ಯಾರು ಕೊಟ್ಟಿರುವುದಿಲ್ಲ. ನನ್ನ ಸಾಕ್ಷಿ ಪ್ರಮಾಣ ಪತ್ರದಲ್ಲಿ ಬರೆದಿರುವ ಮಾಹಿತಿ ನನಗೆ ಗೊತ್ತಿಲ್ಲ. ನನ್ನ ಸಾಕ್ಷಿ ಪ್ರಮಾಣ ಪತ್ರದಲ್ಲಿರುವ ಮಾಹಿತಿಯನ್ನು ನಾನು ಓದಿರುವುದಿಲ್ಲ ಕಾರಣ ನನಗೆ ಓದಲು ಬರುವುದಿಲ್ಲ. ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಓದುವುದಕ್ಕೆ ಬರುವವರ ಹತ್ತಿರ ಓದಿಸಿ ಮಾಹಿತಿಯನ್ನು ತಿಳಿದುಕೊಂಡಿರುವುದಿಲ್ಲ. ಸರ್ವೆ ನಂ.3/3 ಕ್ಕೆ ಸಂಬಂಧಿಸಿದ ಉತಾರವನ್ನು ನಾನು ನೋಡಿರುತ್ತೇನೆ. ಸಾಕ್ಷಿಗೆ ಸರ್ವೆ ನಂ.3/3 ಕ್ಕೆ ಸಂಬಂಧಿಸಿದ ಪಹಣಿ ಪತ್ರಿಕೆಯನ್ನು ತೋರಿಸಿದ್ದು ಸಾಕ್ಷಿಯು ಸದರಿ ಪಹಣಿ ಪತ್ರಿಕೆಯನ್ನು ನೋಡಿ ಗುರುತಿಸಿ , ಸದರಿ ಪಹಣಿ ಪತ್ರಿಕೆಯಲ್ಲಿರುವ ಮಾಹಿತಿಯನ್ನು ಈಗ ನಮೂದಿಸಿರುತ್ತಾರೆ ಎಂದುನುಡಿದಿದ್ದು ಹಾಗಾಗಿ ಸದರಿ ಪಹಣಿ ಪತ್ರಿಕೆಯನ್ನು ನಿಪಿ–17 ಎಂದು ಗುರುತಿಸಲಾಯಿತು. ಸರ್ವೆ ನಂ.3/3 ರ ಪಹಣಿ ಪತ್ರಿಕೆಯಲ್ಲಿರುವ ಮಾಹಿತಿಯು ಈ ಮ್ಯೂಟೇಶನ್ ಪ್ರತಿಯ ಪ್ರಕಾರ ಆಗಿರುತ್ತದೆ ಎಂದರೆ ಸರಿ. ಸಾಕ್ಷಿಯೂ ಸದರಿ ಮ್ಯೂಟೇಶನ್ ಪ್ರತಿಯನ್ನು ನೋಡಿ ಗುರುತಿಸಿದ್ದು, ಸದರಿ ಮ್ಯೂಟೇಶನ್ ಪ್ರತಿಯನ್ನು ನಿಪಿ–18 ಎಂದು ಗುರುತಿಸಲಾಯಿತು.

**ಮರುವಿಚಾರಣೆ ಇಲ್ಲಾಃ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಗಿದೆ.)

ಓ.ಹೇ.ಕೇ. ಸರಿ ಅದೆ.

**(ವಿಜಯಕುಮಾರ ಎನ್ )**

ಹೆಚ್ಚುವರಿ ಸಿವಿಲ್ ಹಾಗೂ ಜೆ.ಎಮ್.ಎಫ್.ಸಿ

ನ್ಯಾಯಾಧೀಶರು ರೋಣ.